ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಫ್ಲೋರೈಡ್ ಬಾಧಿತ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಗಳ ಬಗ್ಗೆ

ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು)-

62 (722) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಫ್ಲೋರೈಡ್ ಬಾಧಿತ ಹಾಗೂ ರಾಸಾಯನಿಕಗಳಿಂದ ಕಲುಷಿತಗೊಂಡಿರುವ ಹಳ್ಳಿಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಹಳ್ಳಿಗಳಿಗೆ ಸುರಕ್ಷಿತ ಶುದ್ಧ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗಿದೆ;

(ಈ) ಬಹುಗ್ರಾಮ ಶುದ್ಧ ಕುಡಿಯುವ ನೀರಿನ ಯೋಜನೆಗಳಿಗೆ ಸರ್ಕಾರವು ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಖರ್ಚು ಮಾಡಲಾದ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕಲಬುರಗಿ, ಬೀದರ್, ರಾಯಚೂರು, ಬಾಗಲಕೋಟೆ, ವಿಜಯಪುರ, ಕೊಪ್ಪಳ, ಬಳ್ಳಾರಿ ಜಿಲ್ಲೆಗಳ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಸೌಲಭ್ಯ ಕಲ್ಪಿಸಲಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಶುದ್ಧ ಕುಡಿಯುವ ನೀರನ್ನು ಒದಗಿಸದಿರುವ ಸದರಿ ಜಿಲ್ಲೆಗಳ ಗ್ರಾಮಗಳೆಷ್ಟು; ಈ ಗ್ರಾಮಗಳಿಗೆ ಯಾವಾಗ ಮಂಜೂರಾತಿ ನೀಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)